ಪ್ರಜಾವಾಣಿ

# ಪಿಯು: ದಶಕದಲ್ಲೇ ಗರಿಷ್ಠ



ರವೀನಾ ಬಿ.ಜೈನ್ ವಾಣಿಜ್ಯ ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆದ ಬೆಂಗಳೂರಿನ ಮಹಾವೀರ ಜೈನ್ ಕಾಲೇಜಿನ ವಿದ್ಯಾರ್ಥಿನಿ

ಬೆಂಗಳೂರು: ಪ್ರಸಕ್ತ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ದಾಖಲೆಯ ಫಲಿತಾಂಶ ಬಂದಿದೆ. ಈ ಬಾರಿ ಪರೀಕ್ಷೆ ಎದುರಿಸಿದ ಒಟ್ಟು ವಿದ್ಯಾರ್ಥಿಗಳ ಪೈಕಿ ಶೇ 57.03ರಷ್ಟು ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದಾರೆ. ಕಳೆದ ವರ್ಷಕ್ಕೆ ಹೋಲಿಸಿದರೆ ಒಟ್ಟಾರೆ ಫಲಿತಾಂಶದಲ್ಲಿ ಶೇ 8.1ರಷ್ಟು ಹೆಚ್ಚಳವಾಗಿದೆ. ಹಿಂದಿನ ವರ್ಷ ಶೇ 48.93ರಷ್ಟು ಫಲಿತಾಂಶ ಬಂದಿತ್ತು.

ವಿಜ್ಞಾನ ವಿಭಾಗದಲ್ಲಿ ನಗರದ ಮಲ್ಲೇಶ್ವರಂನ ಎಂಇಎಸ್ ಕಿಶೋರ ಕೇಂದ್ರದ ಎಂ. ದೀಪಾ (593), ವಾಣಿಜ್ಯ ವಿಭಾಗದಲ್ಲಿ ನಗರದ ವಿವಿ ಪುರಂನ ಮಹಾವೀರ ಜೈನ್ ಕಾಲೇಜಿನ ರವೀನಾ ಬಿ.ಜೈನ್ (591) ಮತ್ತು ಕಲಾ ವಿಭಾಗದಲ್ಲಿ ಕುಂದಗೋಳ ತಾಲ್ಲೂಕಿನ ಕುಬಿಹಾಳದ ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರು ಪದವಿ ಪೂರ್ವ ಕಾಲೇಜಿನ ಶಶಿಕಲಾ ಎಸ್ .ಡವಳಿ (569) ಅವರು ರಾಜ್ಯಕ್ಕೆ ಪ್ರಥಮ ಸ್ಥಾನ ಗಳಿಸಿದ್ದಾರೆ.